# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಗದಗ

ಎಸ್‌ಸಿ ನಂ. 04/2021

Addl. Witness No.1 / ಪಿಡಬ್ಲು: 21

ದಿನಾಂಕಃ 21.01.2025

**ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.**

| | | |
|---|---|---|
| ಸಾಕ್ಷಿದಾರರ ಹೆಸರು | : | ರಮೇಶ ಉಪ್ಪಾರ |
| ತಂದೆ ಹೆಸರು | : | ಮುಕ್ಕಣ್ಣ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ಪೋಲೀಸ ಮುಖ್ಯ ಪೇದೆ ನಂ. 441, ಗದಗ ಗ್ರಾಮೀಣ ಠಾಣೆ |
| ವಾಸ ಸ್ಥಳ | : | ಗದಗ |

## ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರವರಿಂದಃ

1. ನಾನು ಅಗಸ್ಟ – 2019 ರಿಂದ ಅಗಸ್ಟ – 2022 ರ ವರೆಗೆ ಮುಂಡರಗಿ ಪೋಲೀಸ ಠಾಣೆಯಲ್ಲಿ ಪೋಲೀಸ ಪೇದೆಯಾಗಿ ಕೆಲಸ ಮಾಡಿದ್ದೇನೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ದಿಃ 02.09.2020 ರಂದು, ಪ್ರಾಸಾ-16 ರವರು ನನ್ನನ್ನು ತತ್ವದರ್ಶಿ ಆಸ್ಪತ್ರೆ ಹುಬ್ಬಳ್ಳಿಗೆ ಗಾಯದ ಪ್ರಮಾಣ ಪತ್ರ ತರಲು ಕಳಿಸಿರುತ್ತಾರೆ.

3. ಆ ಪ್ರಕಾರ ನಾನು ಅದೇ ದಿನ ತತ್ವದರ್ಶಿ ಆಸ್ಪತ್ರೆ ಹುಬ್ಬಳ್ಳಿಗೆ ಹೋಗಿ ಗಾಯದ ಪ್ರಮಾಣ ಪತ್ರಗಳನ್ನು ತಂದು ಪ್ರಾಸಾ-16 ರವರ ಮುಂದೆ ಹಾಜರಪಡಿಸಿರುತ್ತೇನೆ. ಈಗ ಸದರಿ ಗಾಯದ ಪ್ರಮಾಣ ಪತ್ರಗಳನ್ನು ನೋಡುತ್ತಿದ್ದು, ಅವುಗಳನ್ನು ಈಗಾಗಲೇ ನಿಪಿ-20 ಮತ್ತು 21 ಎಂದು ಗುರುತಿಸಲಾಗಿರುತ್ತದೆ.

4. ಈ ಬಗ್ಗೆ ತನಿಖಾಧಿಕಾರಿಗಳ ಮುಂದೆ ನಾನು ಹೇಳಿಕೆಯನ್ನು ಕೊಟ್ಟಿರುತ್ತೇನೆ.

## ಪಾಟಿ ಸವಾಲುಃ ಶ್ರೀ ಜಿ.ಪಿ. ಕೋಳಿವಾಡ, ಆರೋಪಿತರ ಪರ ವಕೀಲರಿಂದಃ

5. ಪ್ರಾಸಾ-16 ರವರು ನನಗೆ ಮೌಖಿಕವಾಗಿ ಆದೇಶ ಮಾಡಿದ್ದರು. ಆಗ ನಾನು ಠಾಣೆಯಲ್ಲಿ ಇದ್ದೆನು. ನಾನು ದಿಃ 02.09.2020 ರಂದು ತನಿಖಾಧಿಕಾರಿಗಳ ಮುಂದೆ ಹೇಳಿಕೆಯನ್ನು ಕೊಟ್ಟಿರುತ್ತೇನೆ.

6. ನಾನು ತತ್ವದರ್ಶಿ ಆಸ್ಪತ್ರೆ ಹುಬ್ಬಳ್ಳಿಗೆ ಹೋಗಿ ಗಾಯದ ಪ್ರಮಾಣ ಪತ್ರಗಳನ್ನು ತಂದು

ಪ್ರಾಸಾ-16 ರವರ ಮುಂದೆ ಹಾಜರಪಡಿಸಿರುತ್ತೇನೆ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

## ಮರು ವಿಚಾರಣೆ – ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ, ನನ್ನ ಉಕ್ತ ಲೇಖನದಂತೆ, ಸಾಕ್ಷಿಯ ಸಾಕ್ಷವನ್ನು ಬೆರಳಚ್ಚು ಮಾಡಿಸಲಾಯಿತು.)**

**ಓ ಹೇ ಕೇ ಸರಿ ಅದೆ.**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ಗದಗ**